# 2019-2020

## ಅನುಬಂಧ

## ಮಾಹಿತಿ ಹಕ್ಕು ಕಾಯಿದೆ 2005

## ಸಾರ್ವಜನಿಕರಿಗೆ ಬೇಕಾದ ಮಾಹಿತಿಯನ್ನು ಕಾಯ್ದೆ ಕಲಂ 4 (1) (b) (i) ಪ್ರಕಾರ ತಿಳಿಸುವಿಕೆ ಈ ಕೆಳಗಿನಂತಿದೆ

## ಸಂಡೂರು ಉಪ ನೋಂದಣಿ ಕಛೇರಿ ರಚನೆ:

ಉಪ ನೋಂದಣಾಧಿಕಾರಿ

↓

ದ್ವಿತೀಯ ದರ್ಜೆ ಸಹಾಯಕರು -1

↓

ನಾಲ್ಕನೆ ದರ್ಜೆ ನೌಕರರು - 01

**ಕಛೇರಿಯ ಕೆಲಸ ಕಾರ್ಯಗಲು :-**

1) ಹಾಜರುಪಡಿಸಿದ ದಸ್ತಾವೇಜುಗಳ ವರ್ಗೀಕರನ ಮತ್ತು ನೋಂದಣಿ.
2) ನೋಂದಣಿಯಾದ ದಸ್ತಾವೇಜುಗಳ ನಕಲು ಮತ್ತು ಋಣಭಾರ / ಋಣಭಾರ ರಾಹಿತ್ಯ ಪ್ರಮಾಣ ಪತ್ರಗಳನ್ನು ನಿಡುವುದು.
3) ಹಾಜರುಪಡಿಸಿದ ದಸ್ತಾವೇಜು ಮುದ್ರಾಂಕ ಕರ ಕಡಿಮೆ ಇದ್ದಲ್ಲಿ ನ್ಯಾಯ ನಿರ್ಣಯಕ್ಕಾಗಿ ಉಲ್ಲೇಖಿಸುವುದು.
4) ಅಪಮೌಲ್ಯ ದಸ್ಥಾವೇಜುಗಳನ್ನು ಜಿಲ್ಲಾ ನೋಂದಣಾಧಿಕಾರಿಯವರಿಗೆ ಮಾರುಕಟ್ಟೆ ಮೌಲ್ಯ ಪರಿಶೀಲನೆಗಾಗಿ ಉಲ್ಲೇಖಿಸುವುದು.
5) ವಿಶೇಷ ವಿವಾಹ ಮತ್ತು ಹಿಂದೂ ವಿವಾಹ ಕಾಯ್ದೆ ಅಡಿಯಲ್ಲಿ ವಿವಹಾ ನೋಂದಣಿ.
6) ಸಾರ್ವಜನಿಕ ಹಿತಾಸಕ್ತಿ ವಿರುದ್ಧವಾದ ದಸ್ತಾವೇಜುಗಳನ್ನು ನೋಂದಣಿಯಿಂದ ತಿರಸ್ಕರಿಸುವುದು.

ದಾಖಲೆಗಳನ್ನು ಗಣಕೀಕೃತವಾಗಿ ನೋಂದಣಿ ಮಾಡಲು ಇಲಾಖೆಯ ಜೊತೆ ಖಾಸಗಿ ಸಂಸ್ಥೆಯಾದ ECIL (ಗಣಕಯಂತ್ರ ನಿರ್ವಾಹಣಾ ಸಂಸ್ಥೆ) ಸಂಸ್ಥೆಯೊಂದಿಗೆ ಒಪ್ಪಂದವಾಗಿರುತ್ತದೆ.

# ಮಾಹಿತಿ ಪಡೆಯಲು ಹಕ್ಕು ಅಧಿನಿಯಮ ಕಾಯ್ದೆ 2005 ಕಲಂ 4 (b) (ii)

**ಕಾರ್ಯಕಲಾಪಗಳು:-**

**ಸಂಡೂರು ಉಪ ನೋಂದಣಿ ಕಛೇರಿ:-**

1) ಮುದ್ರಾಂಕ ಮತ್ತು ನೋಂದಣಿ ಕಾಯ್ದೆ, ನಿಯಮಗಳು, ಅಧಿಸೂಚನೆ ಮತ್ತು ಸುತ್ತೋಲೆ ಅಡಿಯಲ್ಲಿ ಕಾರ್ಯನಿರ್ವಹಣೆ.
2) ವಿಶೇಷ ವಿವಾಹ ಮತ್ತು ಹಿಂದೂ ವಿವಾಹ ನೋಂದಣಿ ಕಾಯ್ದೆ, ನಿಯಮಗಳು ಮತ್ತು ಸುತ್ತೋಲೆ ಅಡಿಯಲ್ಲಿ ಕಾರ್ಯನಿರ್ವಹಣೆ.
3) ಕರ್ನಾಟಕ ನಾಗರೀಕ ಸೇವಾ ನಿಯಮಗಳು.
4) ಕರ್ನಾಟಕ ಆರ್ಥಿಕ ಸಂಹಿತೆ.
5) ಕರ್ನಾಟಕ ಖಜಾನೆ ಸಂಹಿತೆ.
6) ಕಛೇರಿ ಕೈಪಿಡಿ.
7) ಸಾದಿಲ್ವಾರು ವೆಚ್ಚ.
8) ಸ್ವತ್ತು ಹಸ್ತಾಂತರ ಅಧಿನಿಯಮ, 1929.

ಉಪ ನೋಂದಣಾಧಿಕಾರಿ,
ಸಂಡೂರು

1) ಪಿ.ಎನ್ ಜಯಪದ್ಮ

**ಉಪನೋಂದಣಾಧಿಕಾರಿ**

## ಆಡಳಿತದ ಬಗ್ಗೆ

ಅ)

1) ಆಡಳಿತಾತ್ಮಕವಾಗಿ ಕಛೇರಿಯ ಮೇಲ್ವಿಚಾರಣೆ.
2) ಕಛೇರಿಯ ನಡವಳಿ ಆದೇಶಗಳು.
3) ದೈನಂದಿನ ರಾಜಸ್ವವನ್ನು ಸರ್ಕಾರಕ್ಕೆ ಇರಸಾಲು ಮಾಡುವುದು.
4) ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರ ವೇತನ ಬಿಲ್ಲು ಬಟವಾಡೆ.
5) ವಿದ್ಯುಚ್ಛಕ್ತಿ ಬಿಲ್ಲು ಬಟವಾಡೆ.
6) ಕಛೇರಿಯ ಸಿಬ್ಬಂದಿ ವರ್ಗದವರ ರಜಾ ಮಂಜೂರಾತಿ.
7) ಕಛೇರಿಯ ಸಿಬ್ಬಂದಿ ವರ್ಗದವರ ಬಗ್ಗೆ ಶಿಸ್ತು ಕ್ರಮ ತೆಗೆದುಕೊಳ್ಳಲು ಶಿಫಾರಸ್ಸು ಮಾಡುವುದು.
8) ಕಛೇರಿಯ ಸಿಬ್ಬಂದಿ ವರ್ಗದವರ ರಹಸ್ಯ ವರದಿಯನ್ನು ಮತ್ತು ಆಸ್ತಿ ಹೊಣೆಗಾರಿಕೆ ಪಟ್ಟಿಯನ್ನು ಜಿಲ್ಲಾ ನೋಂದಣಾಧಿಕಾರಿಯವರಿಗೆ ಒಪ್ಪಿಸುವುದು.
9) ಲೇಖನ ಸಾಮಗ್ರಿಗಳ ಸರಬರಾಜು ಮಾಡುವ ಬಗ್ಗೆ ಜಿಲ್ಲಾ ನೋಂದಣಾಧಿಕಾರಿಯವರಿಗೆ ಕೋರಿಕೆ ಸಲ್ಲಿಸುವುದು.
10) ಮುದ್ರಾಂಕ ಮತ್ತು ನೋಂದಣಿ ವಿಯಗಳ ಬಗ್ಗೆ ಸ್ಪಷ್ಟೀಕರಣ ಕೋರುವುದು.
11) ಮೌಲ್ಯಮಾಪನ ಪರಿಷ್ಕರಣೆ (ಸ್ಥಿರಾಸ್ತಿ) ಮಾಡಿ ಕೇಂದ್ರ ಮೌಲ್ಯಮಾಪನ ಸಮಿತಿಗೆ ಒಪ್ಪಿಸುವುದು.
12) ದೈನಂದಿನ, ಮಾಸಿಕ ಮತ್ತು ವಾರ್ಷಿಕ ಲೆಕ್ಕ ಪತ್ರಗಳನ್ನು ಜಿಲ್ಲಾ ನೋಂದಣಾಧಿಕಾರಿಗ ಇವರಿಗೆ ಒಪ್ಪಿಸುವುದು.
13) ವರಮಾನ ತೆರಿಗೆ ಇಲಾಖೆಯವರಿಗೆ ವಾರ್ಷಿಕ ಮಾಹಿತಿ ಪತ್ರಿಕೆ ಒಪ್ಪಿಸುವುದು.
14) ನ್ಯಾಯಾಲಯದ ಪ್ರಕರಣದ ಬಗ್ಗೆ ಕಂಡಿಕೆವಾರು ಉತ್ತರ ನೀಡುವುದು, ಸರ್ಕಾರಿ ವಕೀಲರು ನೇಮಿಸುವ ಬಗ್ಗೆ ಜಿಲ್ಲಾ ನೋಂದಣಾಧಿಕಾರಿ ಇವರಿಗೆ ಪ್ರಸ್ತಾವನೆ ಸಲ್ಲಿಸುವುದು.
15) ಸಿಬ್ಬಂದಿ ವರ್ಗದವರ ಸೇವಾ ವಹಿಗಳನ್ನು ನಿರ್ವಹಿಸುವುದು.
16) ದಸ್ತಾವೇಜು ಬರಹಗಾರರ ಪರವಾನಗಿ ನವೀಕರಿಸುವ ಬಗ್ಗೆ ಸ್ವೀಕರಿಸಿದ ಅರ್ಜಿಗಲನ್ನು ಜಿಲ್ಲಾ ನೋಂದಣಾಧಿಕಾರಿ ಇವರಿಗೆ ಉಲ್ಲೇಖಿಸುವುದು.
17) ಸಾರ್ವಜನಿಕರಿಂದ ಸ್ವೀಕರಿಸಿದ ಮನವಿ / ಅರ್ಜಿಗಳನ್ನು ಸೂಕ್ತವಾ ರೀತಿಯಲ್ಲಿ ವಿಲೇವಾರಿ ಮಾಡುವುದು.
18) ಅಭಿಲೇಖಲಯದ ಸುರಕ್ಷತೆ ಬಗ್ಗೆ ಗಮನ ಹರಿಸುವುದು ಮತ್ತು ದಾಖಲೆಗಳನ್ನು ಕಾಪಾಡುವುದು.